# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 364 |
| ಮಾನ್ಯ ಸದಸ್ಯರ ಹೆಸರು | ಶ್ರೀ.ಎಂ.ಎಲ್ ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 10.12.2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗೆ ಸಂಬಂಧಿಸಿಂತೆ ಸರ್ಕಾರದಿಂದ ಮಂಜೂರಾಗಿರುವ ಫಲಾನುಭವಿಗಳಿಗೆ /ರೈತರಿಗೆ ಸಂಬಂಧಿಸಿದಂತೆ ಪೋಡಿ ಮಾಡಲು ಬಾಕಿ ಇರುವ ಪ್ರಕರಣಗಳೆಷ್ಟು: (ಕಳೆದ 5 ವರ್ಷಗಳ ಸಂಪೂರ್ಣವಾದ ಮಾಹಿತಿ ನೀಡುವುದು) | ಕಳೆದ 05 ವರ್ಷಗಳಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಸರ್ಕಾರದಿಂದ ಮಂಜೂರಾಗಿರುವ ರೈತರಿಗೆ ಮಂಜೂರಿಯಂತೆ ಪೋಡಿ ದುರಸ್ತಿ ಕುರಿತು ತಂತ್ರಾಂಶ ಮುಖಾಂತರ ಭೂಮಾಪನ ಇಲಾಖೆಯಲ್ಲಿ ಸ್ವೀಕೃತವಾದ ಪ್ರಕರಣಗಳ ಬಾಬ್ತು ವರ್ಷವಾರು ಬಾಕಿಯಿರುವ ದರಖಾಸ್ತು ಪ್ರಕರಣಗಳ ತಾಲ್ಲೂಕುವಾರು ಮಾಹಿತಿ ಈ ಕೆಳಗಿನಂತಿರುತ್ತದೆ:- |

**ಕೋಲಾರ ಜಿಲ್ಲೆ**

| ತಾಲ್ಲೂಕು | 2021 | 2022 | 2023 | 2024 | 2025 |
|---|---|---|---|---|---|
| ಶ್ರೀನಿವಾಸಪುರ | 0 | 0 | 0 | 0 | 875 |
| ಮುಳಬಾಗಿಲು | 0 | 0 | 0 | 0 | 1863 |
| ಮಾಲೂರು | 0 | 0 | 0 | 0 | 172 |
| ಕೋಲಾರ | 0 | 0 | 0 | 0 | 1064 |
| ಕೆ.ಜಿ.ಎಫ್ | 0 | 0 | 0 | 0 | 380 |
| ಬಂಗಾರಪೇಟೆ | 0 | 0 | 0 | 0 | 554 |
| ಒಟ್ಟು | 0 | 0 | 0 | 0 | 4908 |

**ಚಿಕ್ಕಬಳ್ಳಾಪುರ ಜಿಲ್ಲೆ**

| ತಾಲ್ಲೂಕು | 2021 | 2022 | 2023 | 2024 | 2025 |
|---|---|---|---|---|---|
| ಚಿಕ್ಕಬಳ್ಳಾಪುರ | 0 | 0 | 0 | 0 | 60 |
| ಶಿಡ್ಲಘಟ್ಟ | 0 | 0 | 0 | 0 | 29 |
| ಚಿಂತಾಮಣಿ | 0 | 0 | 0 | 0 | 584 |
| ಬಾಗೇಪಲ್ಲಿ | 0 | 0 | 0 | 0 | 482 |
| ಗುಡಿಬಂಡೆ | 0 | 0 | 0 | 0 | 84 |
| ಗೌರಿಬಿದನೂರು | 0 | 0 | 0 | 0 | 183 |
| ಮಂಚೇನಹಳ್ಳಿ | 0 | 0 | 0 | 0 | 158 |
| ಚೇಳೂರು | 0 | 0 | 0 | 0 | 75 |
| ಒಟ್ಟು | 0 | 0 | 0 | 0 | 1655 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಆ) | ಈ ಪೈಕಿ ಕಛೇರಿಗಳಲ್ಲಿ ಮೂಲ ದಾಖಲೆಗಳು ನಾಪತ್ತೆಯಾಗಿ ಮಿಸ್ಸಿಂಗ್ ಕಡತಗಳನ್ನು ತಯಾರಿಸಲು ಬಾಕಿಯಿರುವ ಪ್ರಕರಣಗಳು ಎಷ್ಟು: | ಮೂಲ ಮಂಜೂರಿ ದಾಖಲೆಗಳು ಇರುವುದಿಲ್ಲವಾದ್ದರಿಂದ ಗೈರು ವಿಲೇ ಕಡತ ಪುನರ್ ನಿರ್ಮಾಣ ಸಮಿತಿಯಲ್ಲಿ ಗೈರು ವಿಲೇ ಕಡತಗಳನ್ನು ತಯಾರಿಸಲು ತಂತ್ರಾಂಶದ ಮುಖಾಂತರ ಸ್ವೀಕೃತವಾಗಿ, ಬಾಕಿ ಇರುವ ಪ್ರಕರಣಗಳ ವಿವರ ಈ ಕೆಳಕಂಡಂತಿದೆ:- |

| | |
|---|---|
| ಕೋಲಾರ | 24,877 |
| ಚಿಕ್ಕಬಳ್ಳಾಪುರ | 4,290 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಇ) | ದರಖಾಸ್ತು/ಪೋಡಿ ಪ್ರಕರಣಗಳಿಗೆ ರೈತರು ತಂತ್ರಾಂಶದಲ್ಲಿ(ಆನ್‌ಲೈನ್) ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆಯೇ: ಇಲ್ಲದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಸರ್ಕಾರವು ಅವಕಾಶ ಕಲ್ಪಿಸುವುದು: ಅವಕಾಶ ಕಲ್ಪಿಸಲು ಸರ್ಕಾರದಿಂದ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ: | ಸರ್ಕಾರದ ವತಿಯಿಂದ ಸ್ವಯಂಪ್ರೇರಿತವಾಗಿ ರಾಜ್ಯದ ಎಲ್ಲ ಗ್ರಾಮಗಳ ಎಲ್ಲ ಮಂಜೂರಿದಾರರ ಮೂಲ ಮಂಜೂರಿ ದಾಖಲೆಗಳನ್ನು ಹಂತ ಹಂತವಾಗಿ ಆನ್‌ಲೈನ್ ಮುಖಾಂತರ ತಂತ್ರಾಂಶದಲ್ಲಿ ದಾಖಲು ಮಾಡಿ, ಆನ್ ಲೈನ್‌ನಲ್ಲಿ ನಮೂನೆ 1 ರಿಂದ 5 ಗಳನ್ನು ಭರ್ತಿ ಮಾಡಿ ಡಿಜಿಟಲ್ ಮೇಲು ಸಹಿ ಮಾಡಲು ಮತ್ತು ಅದೇ ರೀತಿ ಅಳತೆ ಪ್ರಕರಣಗಳ ನಿರ್ವಹಣೆಯನ್ನು ತಂತ್ರಾಂಶದ ಮುಖಾಂತರ ನಿರ್ವಹಿಸಲು ಕ್ರಮ ಜರುಗಿಸಲಾಗಿದೆ.<br><br>ದರಖಾಸ್ತು ಪೋಡಿ ಪ್ರಕರಣಗಳಿಗೆ ರೈತರು ತಂತ್ರಾಂಶದಲ್ಲಿ (ಆನ್‌ಲೈನ್) ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಆದ್ದರಿಂದ ದರಖಾಸ್ತು ಪೋಡಿ ದುರಸ್ತಿಗಾಗಿ ರೈತರು ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುವುದಿಲ್ಲ. |
| ಈ) | ಬಾಕಿಯಿರುವ ಪೋಡಿ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಾದ ಮಾಹಿತಿ ನೀಡುವುದು) | ಬಾಕಿಯಿರುವ ಪೋಡಿ ಅರ್ಜಿಗಳ ಶೀಘ್ರ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳು:-<br><br>1. ದರಖಾಸ್ತು ಪೋಡಿ ಕುರಿತಂತೆ ನಮೂನೆ 01 ರಿಂದ 05 ಮತ್ತು 06 ರಿಂದ 10 ರವರೆಗಿನ ನಮೂನೆಗಳನ್ನು ಭರ್ತಿ ಮಾಡಿ ದೃಢೀಕರಿಸುವ ಪ್ರಕ್ರಿಯೆಯನ್ನು ದಿನಾಂಕ:25-11-2024ರ ಸರ್ಕಾರದ ಆದೇಶದಲ್ಲಿ ಸರಳೀಕರಿಸಿ, ಸರ್ವೆ ನಂಬರ್‌ನ ಎಲ್ಲಾ ಮಂಜೂರಿದಾರರಿಗೆ ಏಕಕಾಲದಲ್ಲಿ ಪೋಡಿ ದುರಸ್ತಿ ಪಡಿಸಲು ಆದೇಶಿಸಿದೆ.<br>2. ನಮೂನೆ 01 ರಿಂದ 05ಕ್ಕೆ ಉಪ ವಿಭಾಗಾಧಿಕಾರಿಗಳು ಮತ್ತು ಭೂದಾಖಲೆಗಳ ಉಪ ನಿರ್ದೇಶಕರು ಮೇಲುಸಹಿ ಮಾಡುವುದನ್ನು ಕೈಬಿಡಲಾಗಿದೆ.<br>3. ದರಖಾಸ್ತು ಪೋಡಿ ಪ್ರಕರಣಗಳಲ್ಲಿ ನಮೂನೆ 01 ರಿಂದ 05 ಗಳನ್ನು ಭರ್ತಿ ಮಾಡಿ ಡಿಜಿಟಲ್ ಮೇಲು ಸಹಿ ಮಾಡಲು & ಅದೇ ರೀತಿ ಅಳತೆ ಪ್ರಕರಣಗಳ ನಿರ್ವಹಣೆಯನ್ನು ಆನ್ ಲೈನ್ ನಲ್ಲಿ ನಿರ್ವಹಿಸುವ ಸಲುವಾಗಿ ಭೂಮಿ ಉಸ್ತುವಾರಿ ಕೋಶದಿಂದ ತಂತ್ರಾಂಶ ಅಭಿವೃದ್ಧಿ ಪಡಿಸಲಾಗಿದೆ.<br>4. ದರಖಾಸ್ತು ಪೋಡಿ, 11ಇ, ಹದ್ದುಬಸ್ತು ಮುಂತಾದ ಎಲ್ಲಾ ತರಹದ ಅರ್ಜಿಗಳನ್ನು ಸರ್ಕಾರಿ ಭೂಮಾಪಕರೊಂದಿಗೆ ಪರವಾನಗಿ ಭೂಮಾಪಕರನ್ನು ಸಹ ಬಳಸಿಕೊಂಡು ಅಳತೆ ಮಾಡಲು ಆದೇಶಿಸಿದೆ.<br>5. ಭೂಮಾಪನ ಇಲಾಖೆಯಲ್ಲಿ ಅಳತೆ ಕೋರಿ ಸ್ವೀಕೃತವಾಗುವ ಎಲ್ಲಾ ಅರ್ಜಿಗಳನ್ನು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಮೋಜಿಣಿ ತಂತ್ರಾಂಶದ ಮುಖಾಂತರ ಆನ್ ಲೈನ್ ನಲ್ಲಿ ಸ್ವೀಕರಿಸ ಲಾಗುತ್ತಿದ್ದು, ಮೋಜಿಣಿ ತಂತ್ರಾಂಶದ ಮೂಲಕವೇ ಅಳತೆಗಾಗಿ ಭೂಮಾಪಕರಿಗೆ ಹಂಚಿಕೆ ಮಾಡಿ, ಅಳತೆಯಾದ ನಂತರ ಕಡತಗಳನ್ನು ಅಪ್‌ಲೋಡ್ ಮಾಡಲು ಹಾಗೂ ಅಪ್‌ಲೋಡ್ ಮಾಡಿರುವ ಕಡತಗಳ ಪರಿಶೀಲನೆ ಮತ್ತು ಅನುಮೋದನೆಯನ್ನು ಸಹ ತಂತ್ರಾಂಶದ ಮುಖಾಂತರ ಆನ್‌ಲೈನ್‌ನಲ್ಲೇ ಸರದಿ ಸಾಲಿನಂತೆ (FIFO) ನಿರ್ವಹಿಸುವ ಮೂಲಕ, ಪ್ರಕರಣಗಳ ವಿಲೇವಾರಿಯಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಿಲ್ಲದಂತೆ ಕ್ರಮವಹಿಸಲಾಗುತ್ತಿದೆ.<br>6. ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಕುರಿತು ಕಂದಾಯ ಅದಾಲತ್ ಗಳನ್ನು ನಡೆಸಲಾಗುತ್ತಿದೆ.<br>7. ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾಗುತ್ತಿದೆ.<br>8. ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಕಂಇ 206 ಎಸ್‌ಎಸ್‌ಸಿ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು